**ದಿನಾಂಕ: 06.08.2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 180 ಬನಶಂಕರಿ ದೇವಸ್ಥಾನ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

*ಹಾಜರಿದ್ದ ಅಧಿಕಾರಿಗಳು:-*

1. ಶ್ರೀ. ಸತೀಶ್ ಕುಮಾರ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಮಂಜುನಾಥ್ ವೆಂಕಣ್ಣ ನಾಯಕ – ಸಹಾಯಕ ಅಭಿಯಂತರರು (ವಾಡ್ 180 ಬನಶಂಕರಿ ದೇವಸ್ಥಾನ) (ಕಿಯೋನಿಕ್ಸ್)
3. ಶ್ರೀ. ಶಿವರುದ್ರಯ್ಯ – ಹಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
4. ಶ್ರೀಮತಿ. ಅಂಬಿಕ – ಕಿ.ಆ.ಪ (ವಾಡ್ 180 ಬನಶಂಕರಿ ದೇವಸ್ಥಾನ)
5. ಶ್ರೀ. Syed Muiez – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್ಬಿ.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 180 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ನಡೆದ ವಿಷಯಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಲಾಯಿತು. ಅಧಿಕಾರಿಗಳಿಗೆ ನಿಗಧಿತ ಅವಧಿಯೊಳಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿ, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

1. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ಡೆಬ್ರಿಸ್ ವಿಲೇವಾರಿ ಬಗ್ಗೆ.

ವಾರ್ಡ್ ವ್ಯಾಪ್ತಿಯ ಪ್ರಗತಿಪುರ ಮುಖ್ಯರಸ್ತೆಯಲ್ಲಿ ತ್ಯಾಜ್ಯವನ್ನು ಸುರುಯುತ್ತಿರುವುದರಿಂದ ಸಾರ್ವಜನಿಕರಿಗೆ ಓಡಾಡಲು ಕಷ್ಟಕರಾವಾಗುತ್ತಿರುತ್ತದೆ ಸದರಿ ತ್ಯಾಜ್ಯವನ್ನು ವಿಲೇವಾರಿ ಮಾಡುವಂತೆ ಕೋರಿರುತ್ತಾರೆ.

2. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.

ವಾರ್ಡ್‌ನ ಉಮಾರ್‌ಭಾಗ್ ಲೇಔಟ್ ವ್ಯಾಪ್ತಿಯ ಕೃಷ್ಣ ರೆಡ್ಡಿ ರಸ್ತೆಯ ಸುತ್ತ ಮುತ್ತ ಮಳೆಯ ಕಾರಣದಿಂದಾಗಿ ರಸ್ತೆಗಳಲ್ಲಿ ನೀರು ತುಂಬಿ ಮನೆಗಳಿಗೂ ನೀರು ನುಗ್ಗಿರುತ್ತದೆ. ಸದರಿ ಮಳೆನೀರು ಸರಾಗವಾಗಿ ಹರಿಯುವಂತೆ ಚರಂಡಿಗಳನ್ನು ಸ್ವಚ್ಚಗೊಳಿಸಿ ಸದರಿ ಪ್ರದೇಶದಲ್ಲಿ ತುಂಬಿದ ನೀರನ್ನು ಸ್ವಚ್ಚಗೊಳಿಸಲಾಗಿರುತ್ತದೆ.

ಪೈಪ್‌ಲೈನ್ ರಸ್ತೆಯ ಚರಂಡಿಗಳ ಮೇಲೆ ಡೆಬ್ರಿಸ್ ಇರುತ್ತದೆ. ಸದರಿ ಡೆಬ್ರಿಸ್‌ಗಳನ್ನು ವಿಲೇವಾರಿ ಮಾಡಿ ಸ್ವಚ್ಚಗೊಳಿಸಿ ಕೊಡಲು ಸಾರ್ವಜನಿಕರು ಕೋರಿದರು. ಅದರಂತೆ ಸದರಿ ಡೆಬ್ರಿಸ್‌ಗಳನ್ನು ವಿಲೇವಾರಿ ಮಾಡಿ ಸ್ವಚ್ಚಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಪ್ರಗತಿಪುರ ಮುಖ್ಯರಸ್ತೆಯ ಬೆಂಗಳೂರು ತಾಲ್ಲೂಕು ಕಛೇರಿಯ ಹತ್ತಿರ ಡೆಬ್ರಿಸ್ ತುಂಬಿರುತ್ತದೆ. ಸದರಿ ಡೆಬ್ರಿಸ್ ಅನ್ನು ಸ್ವಚ್ಚಗೊಳಿಸಿಕೊಡುವಂತೆ ಕೋರಿದರು. ಅದರಂತೆ ಸದರಿ ಡೆಬ್ರಿಸ್‌ಗಳನ್ನು ವಿಲೇವಾರಿ ಮಾಡಿ ಸ್ವಚ್ಚಗೊಳಿಸುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ರಿಂಗ್ ರಸ್ತೆಯ ಶೋಲ್ಡರ್‌ಡ್ರೈನ್ ನಲ್ಲಿ ಮಳೆಯ ನೀರು ಹರಿದು ಡೆಬ್ರಿಸ್‌ಗಳು ತುಂಬಿರುತ್ತದೆ. ಸದರಿ ಡೆಬ್ರಿಸ್‌ಅನ್ನು ತೆರವುಗೊಳಿಸಿ ನೀರನ್ನು ಸರಾಗವಾಗಿ ಹರಿಯುವಂತೆ ಮಾಡಿಕೊಡಲು ಸಾರ್ವಜನಿಕರು ಕೋರಿದರು. ಅದರಂತೆ ಕ್ರಮಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿದಿನ ಕಸವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಸತೀಶ್ ಕುಮಾರ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 180
ಬನಶಂಕರಿ ದೇವಸ್ಥಾನ